ಇ) ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿದೆ.

ವಿರಾಜಪೇಟೆ ಪಟ್ಟಣದ ಕೊಳಚೆ ಪ್ರದೇಶದ ಘೋಷಣೆ.

536 (3735)

ಶ್ರೀ ಹೆಚ್. ಡಿ. ಬಸವರಾಜು (ವಿರಾಜಪೇಟೆ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿರಾಜಪೇಟೆ ಪಟ್ಟಣದ ಕೆಲ ಆಯ್ದ ಪ್ರದೇಶಗಳನ್ನು ಕೊಳಚೆ ಪ್ರದೇಶಗಳೆಂದು ಘೋಷಿಸಲು ಪ್ರಸ್ತಾವನೆಯನ್ನು ಕಳುಹಿಸಿರುವ ವಿಚಾರ ಸರ್ಕಾರದಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಹೆಚ್. ಡಿ. ರೇವಣ್ಣ (ವಸತಿ ಸಚಿವರು.)

ಅ) ಹೌದು.

ಆ) ಕೊಡಗು ಜಿಲ್ಲೆಯ ವಿರಾಜಪೇಟೆ ಪಟ್ಟಣದ ಪರಿಮಿತಿಯಲ್ಲಿರುವ ಸುಂಕದಕಟ್ಟೆ, ಹರಿಕೇರಿ ಮತ್ತು ಮೊಗರಗಲ್ಲಿ ಈ ಮೂರು ಕೊಳಚೆ ಪ್ರದೇಶಗಳನ್ನು ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿಯ ಕಾಯಿದೆ ಅಡಿಯಲ್ಲಿ ಘೋಷಿಸುವ ಬಗ್ಗೆ ಪ್ರಸ್ತಾವನೆ ಕೊಡಗು ಜಿಲ್ಲಾಧಿಕಾರಿಗಳಿಗೆ ಕೊಳಚೆ ನಿರ್ಮೂಲನಾ ಮಂಡಳಿಯಿಂದ ಕಳುಹಿಸಿದ್ದು, ಜಿಲ್ಲಾಧಿಕಾರಿಗಳ ಪರಿಶೀಲನೆಯಲ್ಲಿದ್ದು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ಕ್ರಿಮಿನಾಶಕಗಳ ಮತ್ತು ರಾಸಾಯನಿಕ ಗೊಬ್ಬರಗಳ ವ್ಯತಿರಿಕ್ತ ಪರಿಣಾಮ.

537 (3108)

ಶ್ರೀ ಡಿ. ಆರ್. ಪಾಟೀಲ್ (ಗದಗ್): ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಸಾಯನಿಕ ಕ್ರಿಮಿನಾಶಕ ಹಾಗೂ ರಾಸಾಯನಿಕ ಗೊಬ್ಬರಗಳ ಬಳಕೆಯಿಂದ ಭೂಮಿ ತನ್ನ ಸತ್ವ ಕಳೆದುಕೊಂಡು ಬರಡಾಗುತ್ತಿರುವುದು ಹಾಗೂ ಜಲ, ವಾಯು

ಮಾಲಿನ್ಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ರಾಸಾಯನಿಕ ಗೊಬ್ಬರ ಹಾಗೂ ಕ್ರಿಮಿನಾಶಕ ಬಳಕೆಯಿಂದ ರೈತರ ಉತ್ಪಾದನಾ ವೆಚ್ಚ ಹೆಚ್ಚುತ್ತಿದ್ದು ಉತ್ಪಾದಕತೆ ಕಡಿಮೆಯಾಗುತ್ತಿರುವುದು ಸರ್ಕಾರ ಗಮನಿಸಿದೆಯೇ?

ಇ) ಹಾಗಿದ್ದಲ್ಲಿ ಭೂಮಿ ಸತ್ವ ಕಾಪಾಡಲು ಹಾಗೂ ರೈತರ ಉತ್ಪಾದನಾ ವೆಚ್ಚ ಕಡಿಮೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಈ) ಸಾವಯವ ಕೃಷಿಯಿಂದ ಭೂಮಿಸತ್ವ ಹೆಚ್ಚಿ ಮಾಲಿನ್ಯ ಕಡಿಮೆಯಾಗಿ ರೈತನ ವೆಚ್ಚ ತಗ್ಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉ) ಹಾಗಿದ್ದಲ್ಲಿ ಈ ಪದ್ಧತಿಯನ್ನು ಸಾಧ್ಯವಿರುವೆಡೆ ವ್ಯಾಪಕವಾಗಿ ಜಾರಿಗೆ ತರಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ.

ಶ್ರೀ ಸಿ.ಬೈರೇಗೌಡ (ಕೃಷಿ ಸಚಿವರು):

ಅ) ಈ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆ.

ಆ) ರಾಸಾಯನಿಕ ಗೊಬ್ಬರ ಹಾಗೂ ಕ್ರಿಮಿನಾಶಕಗಳ ಬಳಕೆಯಿಂದ ಉತ್ಪಾದನಾ ವೆಚ್ಚ ಹೆಚ್ಚುತ್ತಿದ್ದು ಅದಕ್ಕನುಗುಣವಾಗಿ ಬೆಳೆ ಉತ್ಪಾದನೆಯೂ ಸಹ ಹೆಚ್ಚಾಗುತ್ತಿರುವುದನ್ನು ಸರ್ಕಾರ ಗಮನಿಸಿದೆ. ಆದರೆ ಉತ್ಪಾದಕತೆ, ರಸಗೊಬ್ಬರ ಮತ್ತು ಕ್ರಿಮಿನಾಶಕಗಳ ಬಳಕೆಯಿಂದ ಕಡಿಮೆಯಾಗುತ್ತಿರುವುದಿಲ್ಲ. ಇದಕ್ಕೆ ನಿದರ್ಶನವೆಂದರೆ 1988-89ರಲ್ಲಿ ರಾಜ್ಯದ ಸರಾಸರಿ ಉತ್ಪಾದಕತೆ ಪ್ರತಿ ಹೆಕ್ಟೇರ್‌ಗೆ 992 ಕಿ.ಗ್ರಾಂ ಇದ್ದು 1997/98ರಲ್ಲಿ ಪ್ರತಿ ಹೆಕ್ಟೇರಿಗೆ 1083 ಕಿ.ಗ್ರಾಂ ಆಗಿದೆ.

ಇ) ಭೂಮಿಯ ಫಲವತ್ತತೆ ಕಾಪಾಡಲು ಪೂರಕವಾಗಿ ಸಾವಯವ ಗೊಬ್ಬರಗಳನ್ನು ಹೆಚ್ಚು ಹೆಚ್ಚು ಉಪಯೋಗಿಸಲು ಒತ್ತುಕೊಡಲಾಗುತ್ತಿದೆ. ರೈತನ ಉತ್ಪಾದನಾ ವೆಚ್ಚ ಕಡಿಮೆ ಮಾಡಲು ಹಾಗೂ ಹೆಚ್ಚು ಬೆಲೆಯುಳ್ಳ ರಾಸಾಯನಿಕಗಳ ಗೊಬ್ಬರ ಹಾಗೂ ಕೀಟನಾಶಕಗಳ ಉಪಯೋಗವನ್ನು ಕಡಿಮೆ ಮಾಡಲು ಸಮಗ್ರ ಪೀಡೆ ನಿರ್ವಹಣೆ ಪದ್ಧತಿಯನ್ನು ಜನಪ್ರಿಯಗೊಳಿಸುತ್ತಿದ್ದು ಜೈವಿಕ ಗೊಬ್ಬರಗಳನ್ನು ಹಾಗೂ ಜೈವಿಕ ಕೀಟನಾಶಕಗಳನ್ನು ರೈತರಿಗೆ ವಿವಿಧಯೋಜನೆಯಲ್ಲಿ ರಿಯಾಯ್ತಿ ದರದಲ್ಲಿ ಒದಗಿಸಿಕೊಡಲಾಗುತ್ತಿದೆ.

ಈ) ಹೌದು.

ಉ) ಸಾವಯವ ಕೃಷಿ ಪದ್ಧತಿಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ಜನಪ್ರಿಯಗೊಳಿಸಲಾಗುತ್ತಿದೆ, ಮಾಲಿನ್ಯ ಉದ್ಭವವಾಗುವುದನ್ನು ನಿಯಂತ್ರಣದಲ್ಲಿಡಲು

ಸರ್ಕಾರವು ಯೋಜನೆಯನ್ನು ರೂಪಿಸಿ, ರೈತರಿಗೆ ಉತ್ತೇಜನವನ್ನು ನೀಡಲಾಗುತ್ತಿದೆ. ಅವುಗಳಲ್ಲಿ ಮುಖ್ಯವಾದುವುದೆಂದರೆ ಸಾವಯವ ಕೃಷಿ ಯೋಜನೆ, ಜೈವಿಕ ಗೊಬ್ಬರ ಯೋಜನೆ ಸುಧಾರಿತ ಕಾಂಪೋಸ್ಟ್ ಉತ್ತೇಜನ, ಸಮಗ್ರಪೀಡೆನಾಶಕ ಬಳಕೆ, ಹಸಿರೆಲೆ ಗೊಬ್ಬರ ಮತ್ತು ಎರೆಹುಳು ಗೊಬ್ಬರಕ್ಕೆ ಉತ್ತೇಜನ, ಪರತಂತ್ರಜೀವಿಗಳ ಉಪಯೋಗ ಹಾಗೂ ಸಮಗ್ರ ಪೋಷಕಾಂಶಗಳ ನಿರ್ವಹಣಾ ಕಾರ್ಯವನ್ನು ವಿವಿಧಯೋಜನೆಗಳಲ್ಲಿ ಜನಪ್ರಿಯಗೊಳಿಸಲಾಗುತ್ತಿದೆ. ಬೆಳೆ ಉತ್ಪಾದನಾ ಯೋಜನೆಯಲ್ಲಿ ಈ ಕಾರ್ಯಕ್ರಮಕ್ಕೆ ಅನುದಾನವನ್ನು ಸಹ ಮೀಸಲಾಗಿಟ್ಟಿದೆ.

ಕೋಲಾರ ಜಿಲ್ಲೆಯಲ್ಲಿ ಬಸ್ ಮಾರ್ಗಗಳಿಗೆ ಅನುಮತಿ.

538: (3822)

ಶ್ರೀ ಎಸ್.ರಾಜೇಂದ್ರನ್ (ಕೆ.ಜಿ.ಎಫ್): ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೋಲಾರ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ನೀಡಲಾದಮಜಲು ವಾಹನ ಪರವಾನಗಿಗಳ ಒಟ್ಟು ಸಂಖ್ಯೆ;

ಆ) ಅವುಗಳಲ್ಲಿ ಪರಿಶಿಷ್ಟ ಜಾತಿ: ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತರಿಗೆ ನೀಡಲಾದ ಪರವಾನಗಿಗಳು ಎಷ್ಟು?

ಶ್ರೀ ಪಿ.ಜಿ.ಆರ್.ಸಿಂಧ್ಯ (ಸಾರಿಗೆ ಸಚಿವರು):

ಅ) ಕೋಲಾರ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ನೀಡಲಾದ ಮಜಲು ವಾಹನ ಪರವಾನಗಿಗಳ ವಿವರ ಈ ಕೆಳಕಂಡಂತಿದೆ.

1995-96	21
1996-97	07
1997-98	08
1998-99	05 (31-10-98ರವರೆಗೆ)